**<u>ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.</u>**

**<u>ಸಿ.ಸಿ.ನಂ.480/2018</u>**

| | | | |
|---|---|---|---|
| ಸಾಕ್ಷಿದಾರರ ಹೆಸರು | ಮಲ್ಲಯ್ಯ ಬಿಸಲಹಳ್ಳಿ | ಸಿಡಬ್ಲ್ಯೂ | 13 |
| ಗಂಡನ ಹೆಸರು | ಮುಪ್ಪಯ್ಯ | ಪಿಡಬ್ಲ್ಯೂ | 1 |
| ವಯಸ್ಸು | 70 ವರ್ಷ | | |
| ಉದ್ಯೋಗ | ನಿವೃತ್ತ ಮುಖ್ಯಪೇದೆ | | |
| ವಾಸಸ್ಥಳ | ಸಾಗರ ಜಿಃ ಶಿವಮೊಗ್ಗ | | |

**<u>ದಿಃ25.02.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಭಾರತೀಯ ದಂಡ ಪ್ರ.ಸಂ.ಕಲಂ.299 ರಡಿಯಲ್ಲಿ</u>**

1) ನಾನು 2009 ರಿಂದ 2012 ರವರೆಗೆ ಹಾವೇರಿ ಶಹರ ಪೊಲೀಸ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಸೇವೆ ಸಲ್ಲಿಸಿದ್ದೇನೆ. ದಿನಾಂಕಃ 17.05.2011 ರಂದು ಸಾಯಂಕಾಲ 5-00 ಘಂಟೆಗೆ ಠಾಣಾ ಪ್ರಭಾರದಲ್ಲಿದ್ದಾಗ ಚಾ.ಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದು ಠಾಣಾ ಮೊಕದ್ದಮೆ ಸಂಖ್ಯೆಃ 95/2011 ರಂತೆ ಪ್ರಕರಣವನ್ನು ದಾಖಲಿಸಿ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗೆ ನಿವೇದಿಸಿಕೊಂಡಿದ್ದೇನೆ. ದೂರನ್ನು ಗುರುತಿಸಿದ್ದು, ಅದನ್ನು ಮೂಲಪ್ರಕರಣವಾದ ಸಿ.ಸಿ ನಂಬರಃ 105/2012 ರಲ್ಲಿ ನಿ.ಪಿ-3 ಎಂದು ಈಗಾಗಲೇ ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ಈಗಾಗಲೇ ನಿ.ಪಿ-3(ಎ) ಎಂದು ಗುರುತಿಸಲಾಗಿರುತ್ತದೆ. ಪ್ರ.ವ.ವರದಿಯನ್ನು ಈಗಾಗಲೇ ನಿ.ಪಿ-4 ಎಂದು ಗುರುತಿಸಲಾಗಿರುತ್ತದೆ, ಸಾಕ್ಷಿಯ ಸಹಿಯನ್ನು ನಿ.ಪಿ-4(ಎ) ಎಂದು

ಗುರುತಿಸಲಾಗಿರುತ್ತದೆ. ಮುಂದಿನ ತನಿಖೆಗಾಗಿ ಕಡತವನ್ನು ಚಾ.ಸಾ-14 ರವರಿಗೆ ನಿವೇದಿಸಿಕೊಂಡಿದ್ದೇನೆ. ಮೂಲ ಪ್ರಕರಣದಲ್ಲಿ 2 ನೇ ಆರೋಪಿಯು ತಲೆ ಮರೆಸಿಕೊಂಡಿದ್ದರಿಂದ ಆತನ ವಿರುದ್ಧ ಪ್ರಕರಣವನ್ನು ಮೂಲ ಪ್ರಕರಣದಿಂದ ಬೇರ್ಪಡಿಸಿ ಪ್ರತ್ಯೇಕವಾಗಿ ದಾಖಲಿಸಲಾಗಿರುತ್ತದೆ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.

ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು

ಹಾವೇರಿ.